ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:2119/2018

ಚಾಸಾ:12 ಪ್ರಾಸಾ:10

ದಿನಾಂಕ: 23.11.2024

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಅನಿಲ್ ಶೆಟ್ಟಿ |
| ತಂದೆಯ ಹೆಸರು | : | ರಾಜಶೇಖರ ಶೆಟ್ಟಿ |
| ವಯಸ್ಸು | : | 24 ವರ್ಷ |
| ಉದ್ಯೋಗ | : | ಮರ ಕಟ್ಟಿಂಗ್ ಕೆಲಸ |
| ವಾಸ ಸ್ಥಳ | : | ಹೆನ್ನಾಬೈಲು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:</u>**

ಸಾಕ್ಷಿಗೆ ನಿಪಿ-7 ಮತ್ತು 8ನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ-7(ಬಿ) ಮತ್ತು ನಿಪಿ-8(ಬಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಗಳನ್ನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ. ಸಾಕ್ಷಿಗೆ ನಿಪಿ-2 ರಿಂದ 5 ನ್ನು ತೋರಿಸಿದ್ದು ನೋಡಿ ಗುರುತಿಸಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:</u>**

ದಿ: 16-07-2018 ರಂದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ಚಾಸಾ-1ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-11 ರವರ ಸಮಕ್ಷಮ ಬೆಳಿಗ್ಗೆ 10 ರಿಂದ 11-

00ರವರೆಗೆ ಪಂಚನಾಮೆ ಮತ್ತು ನಕ್ಷೆ ತಯಾರಿಸಿ ಅಪಘಾತಕ್ಕೀಡಾದ ವಾಹನ ಸಂಖ್ಯೆ ಕೆಎ-20-ಬಿ-3040 ದುರ್ಗಾಂಬಾ ಬಸ್ಸು ಹಾಗೂ ಕೆಎ-20-ಎನ್-2213 ಸ್ಯಾಂಟ್ರೋ ವಾಹನವನ್ನು ವಶಕ್ಕೆ ಪಡೆದು ನಿಪಿ-2 ರಿಂದ 5 ಫೋಟೋ ತೆಗೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಮೇಲೆ ಹೇಳಿದ ಕ್ರಮವನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.</u>**

**<u>ಮರು ವಿಚಾರಣೆಃ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**